# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಸದಸ್ಯರ ಹೆಸರು: | : | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| 2 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | : | 1066 |
| 3 | ಉತ್ತರಿಸಬೇಕಾದ ದಿನಾಂಕ: | : | 23-02-2024. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬರಗಾಲದ ಸಮಯದಲ್ಲಿ ರೈತರು ಉದ್ಯೋಗಕ್ಕಾಗಿ ಬೇರೆ ಬೇರೆ ಕಡೆ ಗುಳೆಹೋಗುವುದನ್ನು ತಪ್ಪಿಸಲು ಸರ್ಕಾರವು ಯಾವ ಯಾವ ಕ್ರಮಗಳನ್ನು ತೆಗೆದುಕೊಂಡಿದೆ; | ಪ್ರಸ್ತುತ, ರಾಜ್ಯದಲ್ಲಿ ಬರ ಪರಿಸ್ಥಿತಿ ಎದುರಾಗಿದ್ದು, ರಾಜ್ಯ ಸರ್ಕಾರವು 223 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿರುವ ಹಿನ್ನೆಲೆಯಲ್ಲಿ, ರಾಜ್ಯದ 223 ತಾಲ್ಲೂಕುಗಳಿಗೆ 100 ರಿಂದ 150 ಮಾನವ ದಿನಗಳಿಗೆ ಹೆಚ್ಚಿಸಲು ಕೋರಿ ಹಾಗೂ ರಾಜ್ಯದ ಕಾರ್ಮಿಕ ಆಯವ್ಯಯವನ್ನು 13.00 ರಿಂದ 18.00 ಕೋಟಿ ಮಾನವ ದಿನಗಳಿಗೆ ಹೆಚ್ಚಿಸುವಂತೆ ಕೋರಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು, ಕರ್ನಾಟಕ ಸರ್ಕಾರ, ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಮಾನ್ಯ ಆಯುಕ್ತರು, ಗ್ರಾಮೀಣಾಭಿವೃದ್ಧಿ (MGNREGS) ಇವರು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿರುತ್ತದೆ.<br>ಪ್ರಸ್ತುತ ಸಾಲಿನಲ್ಲಿ 28.8 ಲಕ್ಷ ಕುಟುಂಬಗಳಿಗೆ ಸೇರಿದ 51.94 ಲಕ್ಷ ಜನರಿಗೆ ಉದ್ಯೋಗ ಒದಗಿಸಲಾಗಿದೆ. ದಿನಾಂಕ: 14-02-2024 ರ ಅಂತ್ಯಕ್ಕೆ 12.57 ಕೋಟಿ ಮಾನವ ದಿನಗಳ ಉದ್ಯೋಗ ಸೃಜನೆಯಾಗಿದ್ದು, ರೂ. 3361.74 ಕೋಟಿ ಕೂಲಿ ಮೊತ್ತ ಜನರ ಖಾತೆಗಳಿಗೆ ನೇರವಾಗಿ ಜಮೆ ಮಾಡಲಾಗಿರುತ್ತದೆ. 35382 ಕುಟುಂಬಗಳು 100 ದಿನಗಳ ಉದ್ಯೋಗ ಪೂರೈಸಿದ್ದು, 5.92 ಲಕ್ಷ ಕುಟುಂಬಗಳು 70 ರಿಂದ 99 ಮಾನವ ದಿನಗಳ ಉದ್ಯೋಗವನ್ನು ಪೂರೈಸಿವೆ.<br>ಪ್ರಸ್ತುತ ಸಾಲಿನ ಬರದ ಹಿನ್ನೆಲೆಯಲ್ಲಿ 17.59 ಲಕ್ಷ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, 7.62 ಲಕ್ಷ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಈ ಪೈಕಿ 9.88 ಲಕ್ಷ ಕಾಮಗಾರಿಗಳು ಕೃಷಿ ಮತ್ತು ಇತರೆ ಚಟುವಟಿಕೆಗಳಿಗೆ ಸಂಬಂಧಿಸಿದ ಕಾಮಗಾರಿಗಳಾಗಿವೆ. |

<table>
<tr><td></td><td></td><td>ರೈತರು ಉದ್ಯೋಗಕ್ಕಾಗಿ ಬೇರೆ ಬೇರೆ ಕಡೆ ಗುಳೆ ಹೋಗುವುದನ್ನು ತಪ್ಪಿಸಲು ಗ್ರಾಮ ಪಂಚಾಯತಿಗಳಲ್ಲಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು IEC ತಂಡದವರು ಮನೆ-ಮನೆಗೆ ಭೇಟಿ ನೀಡಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಲ್ಲಿ ದೊರೆಯುವ ವೈಯಕ್ತಿಕ ಸೌಲಭ್ಯಗಳು ಮತ್ತು ಸಮುದಾಯ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br><br>ಮುಂದಿನ 2024-25 ನೇ ಸಾಲಿನ ನರೇಗಾ ವಾರ್ಷಿಕ ಕ್ರಿಯಾ ಯೋಜನೆ ತಯಾರಿಸುವಾಗ ವೈಯಕ್ತಿಕ ಸೌಲಭ್ಯಕ್ಕಾಗಿ ಗ್ರಾಮ ಪಂಚಾಯತಿಗಳಲ್ಲಿನ ಎಲ್ಲಾ ಅರ್ಹ ಕುಟುಂಬಗಳನ್ನು ಗ್ರಾಮ ಸಭೆಯಲ್ಲಿ ಆಯ್ಕೆ ಮಾಡಿಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.</td></tr>
<tr><td>ಆ)</td><td>ತೆಗೆದುಕೊಂಡ ಕಾರ್ಯಕ್ರಮಗಳಿಗೆ ಎಷ್ಟು ಅನುದಾನ ಮೀಸಲಿಡಲಾಗಿದೆ; ಇಲ್ಲಿಯವರೆಗೂ ಎಷ್ಟು ಅನುದಾನ ಖರ್ಚು ಮಾಡಲಾಗಿದೆ?</td><td>ಮಹಾತ್ಮಗಾಂಧಿ ನರೇಗಾ ಯೋಜನೆಯ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬೇಡಿಕೆ ಆಧಾರದ ಮೇಲೆ ಉದ್ಯೋಗ ಒದಗಿಸಲಾಗುತ್ತಿದ್ದು, ಅದರಂತೆ, ಕೂಲಿ ಮೊತ್ತ ರೂ.3316.74 ಕೋಟಿ ಮತ್ತು ಸಾಮಾಗ್ರಿ ಮೊತ್ತ ರೂ.1887.12 ಕೋಟಿ ಖರ್ಚು ಮಾಡಲಾಗಿದೆ.<br><table><tr><th>ಆರ್ಥಿಕ ಗುರಿ (ರೂ. ಕೋಟಿಗಳಲ್ಲಿ</th><th>ಪ್ರಾರಂಭಿಕ ಶಿಲ್ಕು</th><th>ಅನುದಾನ ಬಿಡುಗಡೆ</th><th>ವೆಚ್ಚ (ರೂ. ಕೋಟಿಗಳಲ್ಲಿ</th><th>ಶೇ. ಸಾಧನೆ</th></tr><tr><td>7257.46</td><td>630.43</td><td>4805.7</td><td>5417.41</td><td>100</td></tr></table></td></tr>
</table>

**ಸಂಖ್ಯೆ: ಆರ್‌ಡಿಸಿ/ಇಜಿಎಸ್/ 81(24)/ 2024**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ
ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು